# ವಿಡಿಐಟಿಯಲ್ಲಿ ವಿಶ್ವ ಮಹಿಳಾ ದಿನ ಆಚರಣೆ



**ಹಳ್ಳಿಯ ಸಂದೇಶ ನ್ಯೂಸ್**

ಹಳಿಯಾಳ: ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ವಿಶ್ವ ಮಹಿಳಾ ದಿನವನ್ನು ಮಾರ್ಚ್ 8ರಂದು ಆಚರಿಸಲಾಯಿತು. ಮಹಿಳಾ ದಿನದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಅತಿಥಿಯಾಗಿ ಧಾರವಾಡದ ಡಾ. ಗೀತಾ ಬೊಮ್ಮನಗೌಡರ್ ಆಗಮಿಸಿದ್ದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತ ಸಂಸಾರವನ್ನು ನಿಭಾಯಿಸುವಲ್ಲಿ ಪ್ರಮುಖ ಪಾತ್ರ ವಹಿಸುವ ಮಹಿಳೆಯರು ಮಾನಸಿಕವಾಗಿ ಹಾಗೂ ದೈಹಿಕವಾಗಿ ಸದೃಢವಾಗಿ ಇರಬೇಕೆಂದು ಹೇಳಿದರು. ಸಾಮಾಜಿಕ ಜಾಲತಾಣಗಳಲ್ಲಿ ವಿದ್ಯಾರ್ಥಿನಿಯರು ಅವಶ್ಯಕತೆಗೆ ಮೀರಿ ತಮ್ಮನ ತೊಡಗಿಸಿಕೊಳ್ಳದಂತೆ ಕಿವಿಮಾತು ಹೇಳಿದರು. ಉತ್ತಮವಾದ ಹವ್ಯಾಸಗಳನ್ನು ರೂಢಿಸಿಕೊಂಡು ಧನಾತ್ಮಕ ಚಿಂತನೆ ಮಾಡುವಂತೆ ಕರೆ ನೀಡಿದರು. ವಿದ್ಯಾರ್ಥಿನಿಯರು ಒತ್ತಡ ನಿಯಂತ್ರಣಕ್ಕೆ ದುಶ್ಚಟಗಳಿಗೆ ಬಲಿಯಾಗದಿರುವಂತೆ ತಿಳಿಸಿದರು. ಮಹಿಳೆಯರು ಪುರುಷರಿಗೆ ಸಮಾನವಾಗಿ ಎಲ್ಲಾ ವಿಭಾಗದಲ್ಲೂ ಮುಂಚೂಣಿಯಲ್ಲಿರುವುದು ಮಹಿಳಾ ಸಬಲೀಕರಣಕ್ಕೆ ಪುಷ್ಟಿ ನೀಡಿದೆ ಎಂದು ಹೇಳಿದರು. ಮಹಿಳಾ ಘಟಕದ ಸಂಚಾಲಕಿ ಡಾ. ಮೀನಲ್ ಕೆ ಸ್ವಾಗತಿಸಿದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗದ ಮುಖ್ಯಸ್ಥೆ ಪ್ರೊ. ರಾಜೇಶ್ವರಿ ಎನ್ ವಂದಿಸಿದರು. ಪ್ರೊ. ಶೀತಲ್ ಎಂ ನಿರೂಪಿಸಿದರು. ಮಹಿಳಾ ಸಿಬ್ಬಂದಿಗಳು ಹಾಗೂ ನೂರಕ್ಕೂ ಅಧಿಕ ವಿದ್ಯಾರ್ಥಿನಿಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ವಿಶ್ವ ಮಹಿಳಾ ದಿನದ ಅಂಗವಾಗಿ ಮಹಾವಿದ್ಯಾಲಯದ ವಿದ್ಯಾರ್ಥಿನಿಯರಿಗೆ ಹಾಗೂ ಮಹಿಳಾ ಸಿಬ್ಬಂದಿಗಳಿಗೆ ಮೆಹಂದಿ ಸ್ಪರ್ಧೆ, ರಂಗೋಲಿ ಸ್ಪರ್ಧೆ, ಫ್ಯಾಶನ್ ಶೋ , ಅಡುಗೆ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಸ್ಪರ್ಧಾ ವಿಜೇತರನ್ನು ಪುರಸ್ಕರಿಸಲಾಯಿತು.

# ವಿಡಿಐಟಿಯಲ್ಲಿ ವಿಶ್ವ ಮಹಿಳಾ ದಿನ ಆಚರಣೆ



**ಕೊಂಕಣವಾಹಿನಿ ನ್ಯೂಸ್, ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ವಿಶ್ವ ಮಹಿಳಾ ದಿನವನ್ನು ಶನಿವಾರ ಆಚರಿಸಲಾಯಿತು.

ಅತಿಥಿಯಾಗಿ ಧಾರವಾಡದ ಡಾ. ಗೀತಾ ಬೊಮ್ಮನಗೌಡರ್ ಆಗಮಿಸಿದ್ದು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತ ಸಂಸಾರವನ್ನು ನಿಭಾಯಿಸುವಲ್ಲಿ ಪ್ರಮುಖ ಪಾತ್ರ ವಹಿಸುವ ಮಹಿಳೆಯರು ಮಾನಸಿಕವಾಗಿ ಹಾಗೂ ದೈಹಿಕವಾಗಿ ಸದೃಢವಾಗಿ ಇರಬೇಕೆಂದುಹೇಳಿದರು.ಸಾಮಾಜಿಕ ಜಾಲತಾಣಗಳಲ್ಲಿ ವಿದ್ಯಾರ್ಥಿನಿಯರು ಅವಶ್ಯಕತೆಗೆ ಮೀರಿ ತಮ್ಮನ್ನು ತೊಡಗಿಸಿಕೊಳ್ಳದಂತೆ ಕಿವಿಮಾತು ಹೇಳಿದರು. ಉತ್ತಮವಾದ ಹವ್ಯಾಸಗಳನ್ನು ರೂಢಿಸಿಕೊಂಡು ಧನಾತ್ಮಕ ಚಿಂತನೆ ಮಾಡುವಂತೆ ಕರೆ ನೀಡಿದರು. ವಿದ್ಯಾರ್ಥಿನಿಯರು ಒತ್ತಡ ನಿಯಂತ್ರಣಕ್ಕೆ ದುಶ್ಚಟಗಳಿಗೆ ಬಲಿಯಾಗದಿರುವಂತೆ ತಿಳಿಸಿದರು. ಮಹಿಳೆಯರು ಪುರುಷರಿಗೆ ಸಮಾನವಾಗಿ ಎಲ್ಲಾ ವಿಭಾಗದಲ್ಲೂ ಮುಂಚೂಣಿಯಲ್ಲಿರುವುದು ಮಹಿಳಾ ಸಬಲೀಕರಣಕ್ಕೆ ಪುಷ್ಟಿ ನೀಡಿದೆ ಎಂದು ಹೇಳಿದರು. ಮಹಿಳಾ ಘಟಕದ ಸಂಚಾಲಕಿ ಡಾ. ಮೀನಲ್ ಕೆ ಸ್ವಾಗತಿಸಿದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗದ ಮುಖ್ಯಸ್ಥೆ ಪ್ರೊ. ರಾಜೇಶ್ವರಿ ಎನ್ ವಂದಿಸಿದರು. ಪ್ರೊ. ಶೀತಲ್ ಎಂ ನಿರೂಪಿಸಿದರು. ಮಹಿಳಾ ಸಿಬ್ಬಂದಿಗಳು ಹಾಗೂ ನೂರಕ್ಕೂ ಅಧಿಕ ವಿದ್ಯಾರ್ಥಿನಿಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ವಿಶ್ವ ಮಹಿಳಾ ದಿನದ ಅಂಗವಾಗಿ ಮಹಾವಿದ್ಯಾಲಯದ ವಿದ್ಯಾರ್ಥಿನಿಯರಿಗೆ ಹಾಗೂ ಮಹಿಳಾ ಸಿಬ್ಬಂದಿಗಳಿಗೆ ಮೆಹಂದಿ ಸ್ಪರ್ಧೆ, ರಂಗೋಲಿ ಸ್ಪರ್ಧೆ, ಫ್ಯಾಶನ್ ಶೋ , ಅಡುಗೆ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಸ್ಪರ್ಧಾ ವಿಜೇತರನ್ನು ಪುರಸ್ಕರಿಸಲಾಯಿತು.